PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE 30/12/20

### ಜಾನುವಾರ ಪೋಷಣೆಗೆ ಅನುದಾನ | 6 ತಿಂಗಳು ತುಂಬಿದ ಗಂಡುಕರುಗಳು ಗೋಶಾಲೆಗಳಿಗೆ

# ಗೋಹತ್ಯೆ ನಿಷೇಧ ಸುಗ್ರೀವಾಜ್ಞೆ ಜಾರಿಗೆ ಸರ್ಕಾರ ತಯಾರಿ

■ ವಿಜಯವಾಣಿ ಸುದ್ದಿಜಾಲ, ಬೆಂಗಳೂರು 30-12-20

ರಾಜ್ಯಪಾಲರು ಅಂಕಿತ ಹಾಕುತ್ತಿದ್ದಂತೆ ರಾಜ್ಯದಲ್ಲಿ ಗೋಹತ್ಯೆ ತಡೆಯಲು ರೂಪಿಸಿರುವ ಸುಗ್ರೀವಾಜ್ಞೆ ಜಾರಿಗೆ ಸರ್ಕಾರ ಎಲ್ಲ ರೀತಿಯ ಸಿದ್ಧತೆ ಮಾಡಿಕೊಂಡಿದೆ. ಸುಗ್ರೀವಾಜ್ಞೆ ಜಾರಿ ಬಳಿಕ ಸಾಕಲಾಗದ ಹಾಗೂ ವಯಸ್ಸಾದ ಹಸುಗಳನ್ನು ಹತ್ತಿರದ ಗೋಶಾಲೆಗೆ ನೀಡುವಂತೆ ಪಶು ಸಂಗೋಪನೆ ಸಚಿವ ಪ್ರಭು ಚವ್ಹಾಣ್ ರಾಜ್ಯದ ರೈತರಲ್ಲಿ ಮನವಿ ಮಾಡಿದ್ದಾರೆ



**ಗೋಶಾಲೆಗಳ ಸಾಮರ್ಥ್ಯ ಹೆಚ್ಚಳ:** ರಾಜ್ಯದಲ್ಲಿ 159 ಗೋಶಾಲೆಗಳಿದ್ದು ಅವುಗಳಲ್ಲಿ 75ಕ್ಕೂ ಹೆಚ್ಚು ಗೋಶಾಲೆಗಳಿಗೆ ರಾಜ್ಯ ಸರ್ಕಾರ ಅನುದಾನ ನೀಡುತ್ತಿದೆ. ಗೋಶಾಲೆಗಳಲ್ಲಿ ಗೋವುಗಳ ಸಾಕಣೆಯ ಸಾಮರ್ಥ್ಯ ಹೆಚ್ಚಿಸಲು ನಿರ್ಧರಿಸಲಾಗಿದೆ. ಗೋವು ಸಾಕಲು ಆಗದವರು ಜಾನುವಾರುಗಳನ್ನು ಗೋಶಾಲೆಗಳಿಗೆ ಬಿಡಲು ಮುಂದಾದರೆ ಯಾವುದೇ ಕಾರಣಕ್ಕೂ ನಿರಾಕರಿಸುವಂತಿಲ್ಲ ಎಂದು ಸೂಚನೆ ನೀಡಲಾಗಿದೆ. ಹೊಸದಾಗಿ ಗೋಶಾಲೆ ಆರಂಭಿಸುವವರಿಗೆ ಇಲಾಖೆ ಹಾಗೂ ಸರ್ಕಾರದ ಕಡೆಯಿಂದ ಪ್ರೋತ್ಸಾಹ ನೀಡುತ್ತೇವೆ ಎಂದು ಚವ್ಹಾಣ್ ತಿಳಿಸಿದ್ದಾರೆ.

**ಸಾರ್ವಜನಿಕರಿಗೆ ಮನವಿ:** ಗೋವುಗಳ ಸಂರಕ್ಷಣೆ ಕೇವಲ ಸರ್ಕಾರದ ಹೊಣೆ ಅಂತ ತಿಳಿಯದೇ ಸಾರ್ವಜನಿಕರು ಈ ಕಾರ್ಯದಲ್ಲಿ ಕೈ ಜೋಡಿಸಬಹುದು ಎಂದು ಮನವಿ ಮಾಡಿದ್ದಾರೆ.

**ಅಧಿಕಾರಿಗಳಿಗೆ ಎಚ್ಚರಿಕೆ:** ಪ್ರತಿ ಜಿಲ್ಲೆ ವ್ಯಾಪ್ತಿಯಲ್ಲಿ ಪಶುಸಂಗೋಪನೆ ಇಲಾಖೆ ಉಪ ನಿರ್ದೇಶಕರು ಜಿಲ್ಲಾಧಿಕಾರಿಗಳು ಮತ್ತು ತಹಶೀಲ್ದಾರ್ ಅವರೊಂದಿಗೆ ಚರ್ಚಿಸಿ ಸ್ಥಳೀಯವಾಗಿ ಗೋಶಾಲೆ ತೆರೆಯಲು ಕ್ರಮ ಕೈಗೊಳ್ಳಬೇಕು. ಅಲ್ಲಿ ಮೇವು, ನೀರು, ಚಿಕಿತ್ಸೆ ಹಾಗೂ ಬೀಡಾಡಿ ದನಗಳ ನಿರ್ವಹಣೆಗೆ ವ್ಯವಸ್ಥೆ ಮಾಡಬೇಕು ಎಂದು ಸೂಚಿಸಿದ್ದಾರೆ. ರಸ್ತೆಯಲ್ಲಿ ಬೀಡಾಡಿ ಜಾನುವಾರು ಕಂಡುಬಂದಲ್ಲಿ ಕ್ರಮ ವಹಿಸದ ಅಧಿಕಾರಿಗಳ ವಿರುದ್ಧ ಶಿಸ್ತಿನ ಕ್ರಮ ವಹಿಸಲಾಗುವುದು ಎಂದು ಸಚಿವರು ಎಚ್ಚರಿಸಿದ್ದಾರೆ.

**ಇಲಾಖೆಯ ಹದ್ದಿನ ಕಣ್ಣು:** ರಾಜ್ಯ ಪ್ರಾಣಿ ಕಲ್ಯಾಣ ಮಂಡಳಿಯ ಸದಸ್ಯರೊಂದಿಗೆ ಸಹ ಸುದೀರ್ಘವಾಗಿ ಚರ್ಚೆ ಮಾಡಲಾಗಿದ್ದು ರಾಜ್ಯದೆಲ್ಲೆಡೆ ಅಕ್ರಮವಾಗಿ ನಡೆಯುವ ಗೋವುಗಳ ಸಾಗಾಟ, ವಧೆಯ ಬಗ್ಗೆ ನಿಗಾವಹಿಸಿ ಪಶುಸಂಗೋಪನೆ ಇಲಾಖೆ ಹಾಗೂ ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ ಎಲ್ಲೆಡೆ ಹದ್ದಿನ ಕಣ್ಣಿಡಲು ತಿಳಿಸಲಾಗಿದೆ. ಕೃಷಿ ಹಾಗೂ ಪಶುಸಂಗೋಪನೆ ಚಟುವಟಿಕೆಗಳಿಗಾಗಿ ಸಾಗಾಣಿಕೆ ಮಾಡುವ ವರಿಗೆ ನೀಡಬೇಕಾದ ಅನುಮತಿ ಪತ್ರಗಳ ಬಗ್ಗೆಯೂ ಚರ್ಚೆ ನಡೆಸಲಾಗಿದೆ.

ಸುಗ್ರೀವಾಜ್ಞೆ ತರುವುದಾಗಿ ಸರ್ಕಾರ ತೀರ್ಮಾನ ಕೈಗೊಂಡ ಕೂಡಲೇ ವಿರೋಧ ಮಾಡುವುದು ವಿಪಕ್ಷ ನಾಯಕರಿಗೆ ಶೋಭೆ ತರುವುದಿಲ್ಲ ಎಂದು ಸಿದ್ದರಾಮಯ್ಯ ಅವರಿಗೆ ತಿರುಗೇಟು ನೀಡಿದ್ದಾರೆ.

## ಆಹಾರದ ಹಕ್ಕು ಕಸಿಯುತ್ತಿಲ್ಲ

**ಮಾಂಸ ತಿನ್ನುವವರ ಹಕ್ಕನ್ನು ಈ ಕಾಯ್ದೆಯ ಮೂಲಕ ಮೊಟಕು ಗೊಳಿಸುತ್ತಿಲ್ಲ. ಈ ಮಸೂದೆಯಲ್ಲೇ ತಿಳಿಸಿದಂತೆ 13 ವರ್ಷಕ್ಕಿಂತ ಮೇಲ್ಪಟ್ಟ ಎಮ್ಮೆ ಮತ್ತು ಕೋಣಗಳನ್ನು ಕೈಬಿಡಲಾಗಿದೆ. ಆಹಾರದ ಹಕ್ಕನ್ನು ಈ ಕಾಯ್ದೆ ಕಸಿಯುತ್ತಿದೆ ಎಂಬ ಹೇಳಿಕೆಗಳು ನಿರಾಧಾರ. 2010ರಲ್ಲಿ ಇದೇ ಮಸೂದೆಯನ್ನು ಮಂಡಿಸಿದಾಗ ಎಮ್ಮೆ ಮತ್ತು ಕೋಣಗಳನ್ನು ಕೈಬಿಟ್ಟರೆ ಅಂಗೀಕರಿಸಬಹುದು ಎಂದು ಕಾಂಗ್ರೆಸ್ ಅಭಿಪ್ರಾಯ ವ್ಯಕ್ತಪಡಿಸಿತ್ತು. ಇದೇ ಅಂಶಗಳು ಈಗಿನ ಮಸೂದೆಯಲ್ಲಿ ಪರಿಗಣನೆಗೆ ತೆಗೆದುಕೊಂಡರು ವಿರೋಧ ವ್ಯಕ್ತಪಡಿಸುತ್ತಿರುವುದನ್ನು ನೋಡಿದರೆ ಕಾಂಗ್ರೆಸ್‌ನ ಇಬ್ಬಗೆ ನೀತಿಯನ್ನು ಎತ್ತಿ ತೋರಿಸುತ್ತದೆ ಎಂದು ಸಚಿವ ಪ್ರಭು ಚವ್ಹಾಣ್ ಅವರು ಟೀಕಿಸಿದ್ದಾರೆ.**

## ಸುಗ್ರೀವಾಜ್ಞೆಗೆ ಸಿದ್ದು ಆಕ್ಷೇಪ

ಬೆಂಗಳೂರು: ತಿದ್ದುಪಡಿ ರೂಪದ ಗೋ ಹತ್ಯೆ ನಿಷೇಧ ಕಾಯ್ದೆಯನ್ನು ಸುಗ್ರೀವಾಜ್ಞೆ ಮೂಲಕ ಜಾರಿ ಮಾಡಲು ಹೊರಟ ಸರ್ಕಾರದ ಕ್ರಮವನ್ನು ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಖಂಡಿಸಿದ್ದಾರೆ. ವಿಧಾನಮಂಡಲದಲ್ಲಿ ಗೋಹತ್ಯೆ ನಿಷೇಧ ಕಾಯ್ದೆಯ ಬಗ್ಗೆ ಚರ್ಚೆಯನ್ನೇ ಮಾಡದೆ ಸುಗ್ರೀವಾಜ್ಞೆ ಮೂಲಕ ಜಾರಿಗೆ ತಂದಿರುವುದು ಸರ್ಕಾರದ ಹೇಡಿತನವನ್ನು ತೋರಿಸುತ್ತದೆ. ಮತೀಯ ಭಾವನೆಗಳನ್ನು ಕೆರಳಿಸಿ



ರಾಜಕೀಯ ಲಾಭ ಪಡೆಯಬೇಕು ಮತ್ತು ಗೋರಕ್ಷಣೆಯ ಹೆಸರಲ್ಲಿ ಪುಂಡಾಟಿಕೆ ನಡೆಸುವವರಿಗೆ ರಕ್ಷಣೆ ಕೊಡಬೇಕು ಎಂಬ ಎರಡು ದುರುದ್ದೇಶಗಳನ್ನು ಬಿಟ್ಟರೆ ಗೋಹತ್ಯೆ ನಿಷೇಧ ಮಸೂದೆಗೆ ಗೋವಿನ ಬಗ್ಗೆ ಭಕ್ತಿಯಾಗಲಿ ಕಾಳಜಿಯಾಗಲಿ ಇಲ್ಲ ಎಂದು ಹೇಳಿದ್ದಾರೆ.